ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಲಾಕ್‌ಡೌನ್‌ನಲ್ಲಿ ಇಲಾಖೆ ನೀಡಿದ ಪರಿಹಾರಗಳ ಬಗ್ಗೆ

ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)-

83(704) ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2020-21ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ನಗರ ಪ್ರದೇಶಗಳಲ್ಲಿ ದುಡಿಯುತ್ತಿರುವ ಕಟ್ಟಡ ಕಾರ್ಮಿಕರು ಮತ್ತು ಅವರ ಕುಟುಂಬಸ್ಥರಿಗೆ ಆರೋಗ್ಯ ರಕ್ಷಣೆ ದೃಷ್ಟಿಯಿಂದ ಎಷ್ಟು ಮೊಬೈಲ್ "ಕ್ಲಿನಿಕ್" ಗಳನ್ನು ಪ್ರಾರಂಭಿಸಲಾಗಿದೆ;

(ಆ) ಪ್ರಾರಂಭಿಸಿದ್ದಲ್ಲಿ, ಇದುವರೆವಿಗೂ ಎಷ್ಟು ಜನ ಕಾರ್ಮಿಕರು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ;

(ಇ) ಈ ಯೋಜನೆ ಇನ್ನು ಪ್ರಾರಂಭಿಸದೆ ಇದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು; ಈ ವಿಳಂಬಕ್ಕೆ ಕಾರಣಗಳೇನು;

(ಈ) ವಲಸೆ ಕಾರ್ಮಿಕರ ಸಂಖ್ಯೆ ಎಷ್ಟು; ಈ ವಲಸೆ ಕಾರ್ಮಿಕರಿಗೆ ಲಾಕ್‌ಡೌನ್ ಸಂದರ್ಭದಲ್ಲಿ ಯಾವ ಯಾವ ರೀತಿಯ ಕಿಟ್‌ಗಳನ್ನು ವಿತರಿಸಲಾಗಿದೆ; ಇದಕ್ಕೆ ತಗುಲಿದ ವೆಚ್ಚವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಕೋವಿಡ್-19 ರ ಪ್ರಯುಕ್ತ ಲಾಕ್‌ಡೌನ್ ಸಂದರ್ಭದಲ್ಲಿ ತಮ್ಮ ಇಲಾಖೆ ವತಿಯಿಂದ ವಿವಿಧ ವರ್ಗದವರಿಗೆ ವಿತರಿಸಲಾದ ಪರಿಹಾರಗಳೇನು; ಅದಕ್ಕೆ ತಗುಲಿದ ವೆಚ್ಚಗಳೇನು? (ತಾಲ್ಲೂಕುವಾರು ಮಾಹಿತಿ ನೀಡುವುದು)